**ಸಾಕ್ಷಿಗೆ ದಿನಾಂಕಃ 02.04.2026 ರಂದು ಪ್ರಮಾಣ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ. ಕೆ.ಎನ್.ಕೆ. ವಕೀಲರಿಂದಃ**

ಇಂದು ನಾನು ನನ್ನ ಸಾಕ್ಷಿಯ ವಿಚಾರಣೆ ಕುರಿತಂತೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಚಾರಗಳೆಲ್ಲವೂ ಸತ್ಯವಾಗಿರುತ್ತದೆ ಅದನ್ನು ನಾನೇ ನಮ್ಮ ವಕೀಲರ ಮೂಲಕ ಹೇಳಿ ಬರೆಸಿರುತ್ತೇನೆ ಮತ್ತು ಅದಕ್ಕೆ ಸಹಿ ಹಾಕಿರುತ್ತೇನೆ.

ದಿ.07.09.2021ರ ಕಛೇರಿಯ ಲೀಗಲ್ ನೋಟಿಸನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.1 ಎಂದು, ದಿ.08.10.2021ರ ಕಛೇರಿಯ ಲೀಗಲ್ ನೋಟಿಸನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.2 ಎಂದು, ದಿ.08.11.2021ರಂದು ತಹಸೀಲ್ದಾರ್ ರವರಿಗೆ ನೀಡಿದ ನಿರ್ದೇಶನ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.3 ಎಂದು, ಸರ್ವೆ ನಂ.348/1 ರ ಆರ್.ಟಿ.ಸಿ.ಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.4 ಎಂದು, ಸಹಾಯಕ ಕಾರ್ಯಪಾಲಕ ಆಭಿಯಂತರರು ನೀಡಿದ ವಿವರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.5 ಎಂದು, ಮುಖ್ಯಾಧಿಕಾರಿ ಬನ್ನೂರು ಪುರಸಭೆ ಯವರಿಗೆ ನೀಡಿದ ನಿರ್ದೇಶನ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.6 ಎಂದು, ದಿ.04.01.2022ರಂದು ಕಾರ್ಯಪಾಲಕ ಅಭಿಯಂತರರಿಗೆ ಸಲ್ಲಿಸಿದ ಅರ್ಜಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.7 ಎಂದು, ದಿ.23.05.2023ರಂದು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.8 ಎಂದು, 7 ಫೋಟೋಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿ.ಪಿ.9 ಎಂದು, ಒಂದು ಸಿ.ಡಿ.ಯನ್ನು ಹಾಜರುಪಡಿಸಿದ್ದು, ನಿ.ಪಿ.10 ಎಂದು, ದಿ.02.04.2022ರ ಪ್ರಜಾನುಡಿ ದಿನಪತ್ರಿಕೆಯನ್ನು ಹಾಜರುಪಡಿಸಿದ್ದು, ನಿ.ಪಿ.11 ಎಂದು ಗುರುತಿಸಲಾಯಿತು.

(ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ನೀಡಲಾಯಿತು)

**(ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಒ.**

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ. ತಿ.ನರಸೀಪುರ.**